ಕೆರೆ ಅಭಿವೃದ್ಧಿ ಪ್ರಾಧಿಕಾರ

2106 (2450); ಶ್ರೀ ಚೆಲುವರಾಯಸ್ವಾಮಿ.ಎನ್.

ಅ) ರಾಜ್ಯದಲ್ಲಿ 2013–14ನೇ ಸಾಲಿನ ಆಯವ್ಯಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಯಲ್ಲಿರುವ ಕೆರೆಗಳ ಕ್ರಮಬದ್ಧ ನಿರ್ವಹಣೆ ಮತ್ತು ಅಭಿವೃದ್ಧಿಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗುವುದೆಂದು ಘೋಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ಹಾಗಿದ್ದಲ್ಲಿ, ಈ ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ಯಾವಾಗ ರಚಿಸಲಾಗುವುದು ಹಾಗೂ ಕೆರೆಗಳ ಒತ್ತುವರಿಗೆ ಕಡಿವಾಣ ಹಾಕಿ ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮ ತೆಗದುಕೊಳ್ಳಲಾಗುವುದು;

ಇ) 20140–15ನೇ ಸಲಿನ ಆಯವ್ಯಯದಲ್ಲಿ ಘೋಷಿಸಿರುವ ಕೆರೆ ಅಭಿವೃದ್ಧಿ–ನಾಡಿನ ಶ್ರೇಯೋಭಿವೃದ್ಧಿ ಕಾರ್ಯಕ್ರಮಕ್ಕೆ ಒದಗಿಸಿರುವ ಅನುದಾನ ಎಷ್ಟು; ಈ ಅನುದಾನದಲ್ಲಿ ಅಭಿವೃದ್ಧಿಪಡಿಸಿರುವ ಕೆರೆಗಳ ಸಂಖ್ಯೆ ಎಷ್ಟು; ಈ ಯೋಜನೆಗೂ ಕೆರೆ ಅಭಿವೃದ್ಧಿ ಪ್ರಾಧಿಕಾರ ರಚನಾ ಯೋಜನೆಗೂ ಒಂದಕ್ಕೊಂದು ಪುನರಾವರ್ತನೆಯಾಗುವುದಿಲ್ಲವೇ?

ಶ್ರೀ ಶಿವರಾಜ್ ಎಸ್. ತಂಗಡಗಿ

ಅ) ಹೌದು.

ರಾಜ್ಯದಲ್ಲಿ ಕೆರೆಗಳ ಅಭಿವೃದ್ಧಿಗಾಗಿ ಕಾಯಿದೆಯನ್ನು ಜಾರಿಗೆ ತರುವ ಮೂಲಕ ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ಸರ್ಕಾರದ ಆದೇಶ ಸಂಖ್ಯೆ:ಸನೀಇ 50 ಮಸಾವಿ 2013, ದಿನಾಂಕ:12–11–2013ರಂದು ರಚಿಸಲು ಆದೇಶಿಸಿದೆ.

ಆ) ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ಸರ್ಕಾರದ ಆದೇಶ ಸಂಖ್ಯೆ:ಸನೀಇ 50 ಮಸಾವಿ 2013, ದಿನಾಂಕ:12–11–2013ರಂದು ರಚಿಸಲು ಆದೇಶಿಸಿದೆ. ಹಾಗೂ ಈ ಬಗ್ಗೆ ಕೆರೆ ಅಭಿವೃದ್ಧಿ ಪ್ರಾಧಿಕಾರ ಮಸೂದೆ

ವಿಧಾನ ಮಂಡಲದಲ್ಲಿ ಮಂಡಿಸಲಾಗಿದೆ. ಕೆರೆಗಳ ಅಕ್ರಮ ಒತ್ತುವರಿ ಮಾಡುವವರಿಗೆ ಕಾರಾಗೃಹ ಶಿಕ್ಷೆ ಹಾಗೂ ದಂಡ ವಿಧಿಸಲು ಮಸೂದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಕೆರೆಗಳ ಅಭಿವೃದ್ಧಿಯನ್ನು ಆದ್ಯತೆ ಹಾಗೂ ಅನುದಾನದ ಲಭ್ಯತೆ ಅನುಸಾರ ಕೈಗೊಳ್ಳಲಾಗುವುದು.

ಇ) 2014–15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ ಕಾರ್ಯಕ್ರಮಕ್ಕೆ ಅನುದಾನ ಒದಗಿಸಿರುವುದಿಲ್ಲ. ಆದರೆ ಸರ್ಕಾರದ ನಿರ್ದೇಶನದಂತೆ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಒಂದರಂತೆ ಮಾನ್ಯ ಶಾಸಕರುಗಳು ಸೂಚಿಸಿರುವ ಒಟ್ಟು 184 ಕೆರೆಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಒಟ್ಟು ₹ 21790.00 ಲಕ್ಷಗಳ ಕ್ರಿಯಾ ಯೋಜನೆ ಪರಿಶೀಲನೆಯಲ್ಲಿದೆ. ಈ ಯೋಜನೆಗೂ ಕೆರೆ ಅಭಿವೃದ್ಧಿ ಪ್ರಾಧಿಕಾರ ರಚನಾ ಯೋಜನೆಗೂ ಒಂದಕ್ಕೊಂದು ಪುನರಾವರ್ತನೆಯಾಗುವುದಿಲ್ಲ.

ಹಳೆಯ ಕೆರೆಯ ಅಭಿವೃದ್ಧಿ

2107 (3450); ಶ್ರೀ ಚೆಲುವರಾಯಸ್ವಾಮಿ.ಎನ್.

ಅ) ರಾಜ್ಯದಲ್ಲಿ ಹಳೆಯ ಕೆರೆಗಳನ್ನು ಅಭಿವೃದ್ಧಿಪಡಿಸುವ "ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ" ಕಾರ್ಯಕ್ರಮದ ಅಡಿಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರದಲ್ಲೊಂದು ಕೆರೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆಯೇ; ಇದಕ್ಕಾಗಿ ನಿಗದಿಪಡಿಸಿರುವ ಆಯವ್ಯಯ ಎಷ್ಟು; ಕೆರೆಗಳನ್ನು ಆಯ್ಕೆ ಮಾಡಲಾಗಿದೆಯೇ; ಕಾಮಗಾರಿಗಳ ಆರಂಭಕ್ಕೆ ಕೈಗೊಂಡಿರುವ ಕ್ರಮಗಳೇನು?

ಆ) ಮಂಡ್ಯ, ಹಾಸನ, ಮೈಸೂರು, ತುಮಕೂರು ಮತ್ತು ಚಾಮರಾಜನಗರ ಜಿಲ್ಲೆಗಳ ವಿಧಾನಸಭಾ ಕ್ಷೇತ್ರಗಳಲ್ಲಿ ಈ ಕಾರ್ಯಕ್ರಮದಡಿ ಯಾವ ಯಾವ ಕೆರೆಗಳನ್ನು ಆಯ್ಕೆ ಮಾಡಲಾಗಿದೆ; ಈ ಕೆರೆಗಳ ಅಭಿವೃದ್ಧಿ